# ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರ

# Bangalore Mysore Infrastructure Corridor Area Planning Authority

ನಂ. 5, 2ನೇ ಮಹಡಿ, ಲೂಪ್‌ಲೇನ್,
ರೇಸ್‌ಕೋರ್ಸ್ ರಸ್ತೆ, ಬೆಂಗಳೂರು – 560 009.
ದೂರವಾಣಿ : 080 22341230 / 35

No. 5, Second Floor,
Looplane, Race Course Road, Bengaluru - 560 009
Tel : 080 22341230/35 E-mail : bmicapa@gmail.com

ಸಂಖ್ಯೆ: ಬಿಎಂಐಸಿಎಪಿಎ/ವಿನ್ಯಾಸ-02/24/2023-24/1453

ದಿನಾಂಕ: 30 DEC 2023

**ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ**

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2015ರ ಕಲಂ 17(2-ಎ)ರಡಿಯಲ್ಲಿ)

ವಿಷಯ: ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಭೀಮೇನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ:29/2ರ 06ಎ-12ಗು ಪೈಕಿ 06ಎ-11ಗು (ಸರ್ವೆ ನಕ್ಷೆಯಂತೆ) ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ: 13.09.2023
2. ದಿನಾಂಕ:23.11.2023ರಂದು ಜರುಗಿದ ಪ್ರಾಧಿಕಾರದ 78ನೇ ಸಾಮಾನ್ಯ ಸಭೆಯ ವಿಷಯ ಸಂಖ್ಯೆ: III(11)ರ ತೀರ್ಮಾನ
3. ಉಪ ವಿಭಾಗಾಧಿಕಾರಿಗಳು, ರಾಮನಗರ ಉಪ ವಿಭಾಗ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ:ಬಿ.ಡಿಎಸ್.ಎಎಲ್‌ಎನ್:ಎಸ್.ಆರ್65-2004-05, ದಿನಾಂಕ:04.05.2005
4. ಐಸಿಐಸಿಐ ಬ್ಯಾಂಕ್, ಕುಮಾರ ಪಾರ್ಕ್, ಬೆಂಗಳೂರು ಇಲ್ಲಿನ ಡಿ.ಡಿಗಳ ಸಂಖ್ಯೆ: 516611, 516612, 516613, 516614, 516615 ಮತ್ತು 516616, ದಿನಾಂಕ:08.12.2023

*******

**ಪ್ರಸ್ತಾವನೆ;**

ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಭೀಮೇನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ:29/2ರ 06ಎ-12ಗು ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಕೋರಿ ಭೈಯ್ಯ ಎಂಟರ್ ಪ್ರೈಸಸ್ ಎಲ್.ಎಲ್.ಪಿರ ಜಿಪಿಎ ದಾರರಾದ M/s Guru Punvaani Properties, #14, 1ನೇ ಮಹಡಿ, 9ನೇ ಅವೆನ್ಯೂ, 3ನೇ ಕ್ರಾಸ್, ಎನ್.ಎಸ್.ಐಯ್ಯಂಗಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು ಇವರು ಉಲ್ಲೇಖ(1)ರಲ್ಲಿ ಮನವಿ ಸಲ್ಲಿಸಿರುತ್ತಾರೆ.

ಪರಿಶೀಲಿಸಲಾಗಿ, ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದಿಂದ ಅನುಮೋದನೆಯಾಗಿರುವ ಮಹಾಯೋಜನೆ ನಕ್ಷೆಯಲ್ಲಿ ಪ್ರಸ್ತಾಪಿತ ಜಮೀನನ್ನು ವ್ಯವಸಾಯ ವಲಯವೆಂದು ವರ್ಗೀಕರಿಸಿರುವ ಭೂ ಉಪಯೋಗದಲ್ಲಿ ಕಾಯ್ದಿರಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ನಅಇ 493 ಮೈಅಪ್ರಾ 2010, ಬೆಂಗಳೂರು, ದಿನಾಂಕ:07.08.2010 ರಲ್ಲಿ ಭೀಮೇನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ:38ರಲ್ಲಿನ 06ಎ-35ಗು ಪೈಕಿ 03ಎ-25ಗು ಮತ್ತು ಸರ್ವೆ ಸಂಖ್ಯೆ:29/2ರಲ್ಲಿ 06ಎ-12ಗು ಒಟ್ಟು 09ಎ-37ಗು ವಿಸ್ತೀರ್ಣದ ಜಮೀನನ್ನು ವ್ಯವಸಾಯ ವಲಯದಿಂದ ವಸತಿ ಉದ್ದೇಶಕ್ಕೆ ಭೂ ಉಪಯೋಗ ಬದಲಾವಣೆ ಆದೇಶ ಹೊರಡಿಸಲಾಗಿರುತ್ತದೆ. ಸದರಿ ಜಮೀನನ್ನು ಉಲ್ಲೇಖ(3)ರನ್ವಯ ಉಪವಿಭಾಗಾಧಿಕಾರಿಗಳು, ರಾಮನಗರ ಉಪವಿಭಾಗ ರವರು ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಆದೇಶ ಹೊರಡಿಸಿರುತ್ತಾರೆ.

ಪ್ರಸ್ತಾವನೆಯನ್ನು ಉಲ್ಲೇಖ(2)ರ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಲಾಗಿ, "*ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಭೀಮೇನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ:29/2ರ 06ಎ-12ಗು ಪೈಕಿ ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ರಾಮನಗರ ತಾಲ್ಲೂಕು, ರಾಮನಗರ ರವರು ದೃಢೀಕರಿಸಿರುವ ಸರ್ವೆ ನಕ್ಷೆಯಂತೆ ಲಭ್ಯವಿರುವ 06ಎ-11ಗು ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ 2015 ಕಲಂ 17(2ಎ) ರಂತೆ ತಾತ್ಕಾಲಿಕ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಗಿರುತ್ತದೆ*". ಪ್ರಾಧಿಕಾರದ ಸಭೆಯ ತೀರ್ಮಾನದಂತೆ ಅರ್ಜಿದಾರರು ಶುಲ್ಕ ರೂ.18,36,650/-(ರೂಪಾಯಿ ಹದಿನೆಂಟು ಲಕ್ಷದ ಮೂವತ್ತಾರು ಸಾವಿರದ ಆರುನೂರ ಐವತ್ತು) ಗಳನ್ನು ಉಲ್ಲೇಖ(4)ರನ್ವಯ ಪಾವತಿಸಿರುತ್ತಾರೆ.

ಅರ್ಜಿದಾರರು ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ರಾಮನಗರ ತಾಲ್ಲೂಕು ರವರು ದೃಢೀಕರಿಸಿರುವ ಸರ್ವೆ ನಕ್ಷೆಯನ್ನು ಆಧರಿಸಿ ತಯಾರಿಸಿ ಸಲ್ಲಿಸಿರುವ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯು ಪ್ರಾಧಿಕಾರದ ವಲಯ ನಿಯಮಾವಳಿಗಳನ್ವಯ

......2

174Va Ra & Ma 100% 17(2A)

30/12/2023

**ಸಂಖ್ಯೆ: ಬಿಎಂಐಸಿಎಪಿಎ/ವಿನ್ಯಾಸ-02/24/2023-24**

**ಇದ್ದು, ಅದರಲ್ಲಿ ವಸತಿಗಾಗಿ 13,408.92ಚ.ಮೀ (ಶೇಕಡ 52.80), ಉದ್ಯಾನವನಕ್ಕಾಗಿ 2,619.44ಚ.ಮೀ (ಶೇಕಡ 10.32), ನಾಗರೀಕ ಸೌಲಭ್ಯಕ್ಕಾಗಿ 1,276.44ಚ.ಮೀ (ಶೇಕಡ 5.03) ಹಾಗೂ ರಸ್ತೆಗಾಗಿ 8,088.87ಚ.ಮೀ (ಶೇಕಡ 31.85)** ಪ್ರದೇಶವನ್ನು ನಿಗಧಿಪಡಿಸಿ ಸದರಿ ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ವಿವಿಧ ಅಳತೆಯ ಒಟ್ಟು 103 ನಿವೇಶನಗಳನ್ನು ಅಳವಡಿಸಲಾಗಿರುತ್ತದೆ. ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2015ರ ಕಲಂ 17(2-ಎ) ರಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನೀಡುವ ಸಂಬಂಧ ಈ ಕೆಳಕಂಡಂತೆ ಆದೇಶಿಸಲಾಗಿರುತ್ತದೆ.

**ಆದೇಶ ಸಂ: ಬಿಎಂಐಸಿಎಪಿಎ/ವಿನ್ಯಾಸ-02/24/2023-24, ದಿನಾಂಕ:** 30 DEC 2023

ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಭೀಮೇನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ:29/2ರ 06ಎ-12ಗು ಪೈಕಿ ಭೂ ದಾಖಲೆಗಳ ಸಹಾಯಕ ನಿರ್ದೇಶಕರು ದೃಢೀಕರಿಸಿರುವ ಸರ್ವೆ ನಕ್ಷೆಯನ್ವಯ ಲಭ್ಯವಿರುವ 06ಎ-11ಗು ವಿಸ್ತೀರ್ಣದ ಜಮೀನಿಗೆ ಮಹಾಯೋಜನೆಯ ವಲಯ ನಿಯಮಾವಳಿಗಳನ್ವಯ ಸಿದ್ಧಪಡಿಸಿರುವ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಪರಿಶೀಲಿಸಿದ್ದು, ಭೂಮಿಯ ಮೇಲೆ ಅಳವಡಿಸಿ ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ಮಾತ್ರ **(For Demarcation and Development purpose only)** ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2015ರ ಕಲಂ 17(2-ಎ)ರನ್ವಯ ಈ ಕೆಳಕಂಡ ಷರತ್ತಿಗೊಳಪಡಿಸಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

1. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) 2021ರ ಅಧ್ಯಾದೇಶ ಸಂಖ್ಯೆ:6ರಂತೆ ಕಲಂ 17(2ಡಿ)ರನ್ವಯ ವಿನ್ಯಾಸದ ಅಭಿವೃದ್ಧಿ ಕಾಮಗಾರಿಗಳನ್ನು ಅನುಮೋದನೆಯ ದಿನಾಂಕದಿಂದ 03 ವರ್ಷಗಳ ಅವಧಿಯೊಳಗೆ ಪೂರ್ಣಗೊಳಿಸತಕ್ಕದ್ದು. ವಿನ್ಯಾಸವನ್ನು ಅಭಿವೃದ್ಧಿಪಡಿಸುವುದು ವಿಳಂಬವಾದಲ್ಲಿ ಸಕಾರಣಗಳನ್ನು ಲಿಖಿತವಾಗಿ ನೀಡಿ, ಲೇಔಟ್ ಅಭಿವೃದ್ಧಿಯ ಅವಧಿಯನ್ನು ಒಂದು ವರ್ಷಕ್ಕೆ ಮೀರದಂತೆ ವಿಸ್ತರಿಸಿಕೊಳ್ಳತಕ್ಕದ್ದು. ಸದರಿ ಅವಧಿಯೊಳಗೆ (ಒಟ್ಟಾರೆ 04 ವರ್ಷ) ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಳ್ಳದಿದ್ದಲ್ಲಿ ಸದರಿ ಅನುಮೋದನೆಯು ತಂತಾನೇ ರದ್ದುಗೊಳ್ಳುವುದು.
2. **ಈ ಪ್ರಸ್ತಾವಿತ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಭೂಮಿಯ ಮೇಲೆ ಅಳವಡಿಸುವ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ಮಾತ್ರ (For Demarcation and Development purpose only) ಅನುಮೋದಿಸಲಾಗಿದ್ದು, ವಿನ್ಯಾಸದಲ್ಲಿನ ಯಾವುದೇ ನಿವೇಶನಗಳನ್ನು ಪರಭಾರೆ ಹಾಗೂ ನೋಂದಣಿ ಮಾಡತಕ್ಕದ್ದಲ್ಲ.**
3. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು, ಜಮೀನಿನಲ್ಲಿ ಅಳವಡಿಸುವಾಗ ಅಳತೆಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ವಿನ್ಯಾಸದಲ್ಲಿ ಆಗಬಹುದಾದ ಮಾರ್ಪಾಡುಗಳಿಗೆ ಪ್ರಾಧಿಕಾರದಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು.
4. ಸದರಿ ಜಮೀನು ಬಿಎಂಐಸಿ ಯೋಜನೆ ಮತ್ತು ಇತರೆ ಯೋಜನೆಗೆ ಭೂಸ್ವಾಧೀನಕ್ಕೆ ಸೇರಿದ್ದಲ್ಲಿ ಅಂತಹ ವಿಸ್ತೀರ್ಣವನ್ನು ಅರ್ಜಿದಾರರು ಯಾವುದೇ ತಂಟೆತಕರಾರು ಇಲ್ಲದೆ ನಿಯಮಾನುಸಾರ ಸಕ್ಷಮ ಪ್ರಾಧಿಕಾರಕ್ಕೆ ಬಿಟ್ಟುಕೊಡತಕ್ಕದ್ದು. ತದನಂತರ ಪರಿಷ್ಕೃತ ವಿನ್ಯಾಸ ನಕ್ಷೆಗೆ ಈ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.
5. ರಿಯಲ್ ಎಸ್ಟೇಟ್ ನಿಯಂತ್ರಣ ಮತ್ತು ಅಭಿವೃದ್ಧಿ ಅಧಿನಿಯಮ, 2016 (RERA) ಹಾಗೂ ಸಂಬಂಧಿತ ನಿಯಮಗಳು, 2017ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿ ಮಾಡಿಕೊಳ್ಳತಕ್ಕದ್ದು.
6. ಪ್ರಸ್ತಾವಿತ ವಸತಿ ವಿನ್ಯಾಸದಲ್ಲಿನ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಕಲ್ವರ್ಟ್, ವಿದ್ಯುತ್ ಸರಬರಾಜು, ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ, ಉದ್ಯಾನವನ ಅಭಿವೃದ್ಧಿ ಕಾಮಗಾರಿಗಳು ಹಾಗೂ ಇತರೆ ಎಲ್ಲಾ ಕಾಮಗಾರಿಗಳನ್ನು ಸಮರ್ಪಕವಾಗಿ ಪೂರ್ಣಗೊಳಿಸಿ ಸಂಬಂಧಪಟ್ಟ ಇಲಾಖೆ/ಸಕ್ಷಮ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸತಕ್ಕದ್ದು.
7. ಅಭಿವೃದ್ಧಿದಾರರು ಸರ್ಕಾರದಿಂದ ನಿಗಧಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಸಹ ಪಾವತಿಸತಕ್ಕದ್ದು.
8. ಪ್ರಸ್ತಾವಿತ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆಗಳ ಎರಡು ಬದಿಯಲ್ಲಿ ಕಾಂಕ್ರೀಟ್ ಚರಂಡಿಗಳನ್ನು ನಿರ್ಮಿಸತಕ್ಕದ್ದು.
9. ಪ್ರಸ್ತಾವಿತ ಅನುಮೋದಿತ ವಸತಿ ವಿನ್ಯಾಸದಂತೆ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಂತೆ ಅಂತರ್ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

......3



30 12/2023

ಸಂಖ್ಯೆ: ಬಿಎಂಐಸಿಎಪಿಎ/ವಿನ್ಯಾಸ-02/24/2023-24

ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡು ಬದಿಗಳಲ್ಲಿ ಹೊಸ ಸಸಿಗಳನ್ನು ಬೆಳೆಸಲು ಸೂಕ್ತ ಕ್ರಮಕೈಗೊಳ್ಳುವುದು.

11. ಪ್ರಸ್ತಾವಿತ ವಸತಿ ವಿನ್ಯಾಸವನ್ನು ಭೂಮಿಯ ಮೇಲೆ ಅಳವಡಿಸಿ, ಅಭಿವೃದ್ಧಿಪಡಿಸಿ ಪ್ರಾಧಿಕಾರದ ಪರಿಶೀಲನೆಗೆ ಒಳಪಡಿಸಿದ ನಂತರ, ಸಾರ್ವಜನಿಕ ಉದ್ದೇಶದ ಜಾಗೆಯಾದ ನಾಗರೀಕ ಸೌಲಭ್ಯದ ನಿವೇಶನವನ್ನು ಈ ಪ್ರಾಧಿಕಾರಕ್ಕೆ ಹಾಗೂ ಉದ್ಯಾನವನ ಮತ್ತು ರಸ್ತೆ ಪ್ರದೇಶಗಳನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗೆ ಯಾವುದೇ ಪರಿಹಾರವನ್ನು ಕೋರದೆ ಪುಕ್ಕಟೆಯಾಗಿ ನೋಂದಾಯಿಸಿ ಪರಿತ್ಯಜನಾ ಪತ್ರದ (Registered Relinquishment deed) ಮುಖಾಂತರ ಹಸ್ತಾಂತರಿಸತಕ್ಕದ್ದು. ಸದರಿ ನೋಂದಾಯಿತ ಪರಿತ್ಯಜನಾ ಪತ್ರದ ದಾಖಲೆ ಸಲ್ಲಿಸಿದ ನಂತರವಷ್ಟೇ ಅಂತಿಮ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ ಪರಿಶೀಲಿಸಲಾಗುವುದು.
12. ಪ್ರಾಧಿಕಾರದಿಂದ ಕೆಟಿಸಿಪಿ ಕಾಯ್ದೆ, 1961ರ ಕಲಂ 17(2-ಬಿ) ರನ್ವಯ ಅಂತಿಮ ವಿನ್ಯಾಸ ನಕ್ಷೆಗೆ ಅನುಮೋದನೆ ಪಡೆಯುವವರೆಗೂ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ಸ್ಥಳೀಯ ಸಂಸ್ಥೆಯು ಖಾತೆ ತೆರೆಯತಕ್ಕದ್ದಲ್ಲ.
13. ಪ್ರಸ್ತಾವಿತ ವಸತಿ ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
14. ಪ್ರಸ್ತಾವಿತ ವಸತಿ ವಿನ್ಯಾಸದಲ್ಲಿನ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
15. ಪ್ರಸ್ತಾವಿತ ವಸತಿ ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆಗಳು ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ವಿನ್ಯಾಸಕ್ಕೆ ಪ್ರಾಧಿಕಾರವು ನೀಡಿರುವ ತಾತ್ಕಾಲಿಕ ಅನುಮೋದನೆಯು ತಾನಾಗಿ ರದ್ದುಗೊಳ್ಳಲ್ಪಡುತ್ತದೆ.

ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯನ್ನು ರದ್ದುಪಡಿಸಲು ಕ್ರಮವಹಿಸಲಾಗುವುದು ಹಾಗೂ ಕೆಟಿಸಿಪಿ ಕಾಯ್ದೆ, 1961ರಡಿಯಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು.

ಸಹಿ/-
ಸದಸ್ಯ ಕಾರ್ಯದರ್ಶಿಗಳು,
ಬಿ.ಎಂ.ಐ.ಸಿ.ಎ.ಪಿ.ಎ., ಬೆಂಗಳೂರು.

ಗೆ,

ಭೈಯ್ಯ ಎಂಟರ್ ಪ್ರೈಸಸ್ ಎಲ್.ಎಲ್.ಪಿರ ಜಿಪಿಎ ದಾರರಾದ
M/s Guru Punvaani Properties,
#14, 1ನೇ ಮಹಡಿ, 9ನೇ ಅವೆನ್ಯೂ,
3ನೇ ಕ್ರಾಸ್, ಎನ್.ಎಸ್.ಐಯ್ಯಂಗಾರ್ ರಸ್ತೆ,
ಶೇಷಾದ್ರಿಪುರಂ, ಬೆಂಗಳೂರು

<u>ಪ್ರತಿಯನ್ನು:</u>

1. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಮಂಚನಾಯಕನಹಳ್ಳಿ ಗ್ರಾಮ ಪಂಚಾಯಿತಿ, ಬಿಡದಿ ಹೋಬಳಿ, ರಾಮನಗರ ತಾಲ್ಲೂಕು ಇವರಿಗೆ ವಿನ್ಯಾಸ ನಕ್ಷೆಯ ಪ್ರತಿಯನ್ನು ಕಳುಹಿಸುತ್ತಾ, ಸದರಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡುವವರೆಗೆ ಈ ವಿನ್ಯಾಸ ನಕ್ಷೆಯಲ್ಲಿನ ಯಾವುದೇ ನಿವೇಶನಗಳಿಗೆ ಖಾತೆ ತೆರೆಯಬಾರದೆಂದು ತಿಳಿಸಲಾಗಿದೆ.
2. ಕಾರ್ಯದರ್ಶಿಗಳು, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ), ನಂ:1/14, 2ನೇ ಮಹಡಿ, ಸಿಲ್ವರ್ ಜ್ಯೂಬ್ಲಿ ಬ್ಲಾಕ್, ಸಿಎಸ್ಐ ಕಾಂಪೌಂಡ್, 3ನೇ ಕ್ರಾಸ್, ಮಿಷನ್ ರಸ್ತೆ, ಯುನಿಟಿ ಬಿಲ್ಡಿಂಗ್, ಸಂಪಂಗಿರಾಮ ನಗರ, ಬೆಂಗಳೂರು-560027 ಇವರಿಗೆ ಅನುಮೋದಿತ ನಕ್ಷೆಯ 01 ಪ್ರತಿಯನ್ನು ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
3. ಕಛೇರಿ ಪ್ರತಿ.

30/12/2023

ಸದಸ್ಯ ಕಾರ್ಯದರ್ಶಿಗಳು,
ಬಿ.ಎಂ.ಐ.ಸಿ.ಎ.ಪಿ.ಎ., ಬೆಂಗಳೂರು.